ವಸತಿ ಶಾಲೆ ಕಟ್ಟಡ ಕಾಮಗಾರಿ

487(1078); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಯಭಾಗ ತಾಲ್ಲೂಕಿನ ಮೇಕಳಿ ಗ್ರಾಮಕ್ಕೆ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮಂಜೂರು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಶಾಲೆಯ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣಗಳೇನು;

ಇ) ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹೌದು.

ಆ) ಮತ್ತು ಇ) ಈ ವಸತಿ ಶಾಲೆಗೆ ಶಾಲಾ ಸಂಕೀರ್ಣ ನಿರ್ಮಾಣ ಮಾಡಲು ಸೂಕ್ತವಾದ ನಿವೇಶನ ಮಂಜೂರಾಗಿರುವುದಿಲ್ಲ. ನಿವೇಶನ ಲಭ್ಯವಾದ ನಂತರ ಕಟ್ಟಡ ನಿರ್ಮಿಸಿ ವಸತಿ ಶಾಲೆಯನ್ನು ಪ್ರಾರಂಭ ಮಾಡಲಾಗುವುದು.

ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಕಟ್ಟಡ

488(1079); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಯಭಾಗ ತಾಲ್ಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಲಭ್ಯವಿರುವ ನಿವೇಶನದಲ್ಲಿ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರಕ್ಕಿರುವ ತೊಂದರೆಗಳೇನು;